ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1561
ಉತ್ತರಿಸಬೇಕಾದ ದಿನಾಂಕ : 24.09.2021
ಸದಸ್ಯರ ಹೆಸರು : ಶ್ರೀ ಬಿ.ಜಿ.ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು)

ಉತ್ತರಿಸುವ ಸಚಿವರು : ಮಾನ್ಯ ರೇಷ್ಮೆ, ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು.

ಕ್ರಸ	ಪ್ರಶ್ನೆ	ಉತ್ತರ
ಅ)	ಕರ್ನಾಟಕ ರಾಜ್ಯ ಕ್ರಿಕೆಟ್ ಅಸೋಸಿಯೇಷನ್ ನವರು ಗುಲಬರ್ಗಾ ವಿಶ್ವವಿದ್ಯಾಲಯದಲ್ಲಿ ಅಂತಾರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣ ನಿರ್ಮಾಣ ಮಾಡಲು ಪ್ರಸ್ತಾವನೆ ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸರ್ಕಾರದ ಮುಂದಿನ ಕ್ರಮವೇನು (ವಿವರ ನೀಡುವುದು)	ಬಂದಿದೆ. ಕಲಬುರಗಿ ಜಿಲ್ಲಾಡಳಿತದಿಂದ ಕ್ರಿಕೆಟ್ ಕ್ರೀಡಾಂಗಣವನ್ನು ನಿರ್ಮಿಸಲು ಸೂಕ್ತ ನಿವೇಶನವನ್ನು ಗುರುತಿಸಿದ ನಂತರ ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆ ಮೂಲಕ ಕ್ರಿಕೆಟ್ ಕ್ರೀಡಾಂಗಣ ನಿರ್ಮಾಣದ ಕುರಿತು ಸೂಕ್ತ ಕ್ರಮ ವಹಿಸಲಾಗುವುದು.
ಆ)	ಗುಲಬರ್ಗಾ ವಿಶ್ವವಿದ್ಯಾಲಯದಲ್ಲಿ ಕರ್ನಾಟಕ ರಾಜ್ಯ ಕ್ರಿಕೆಟ್ ಅಸೋಸಿಯೇಷನ್ ವತಿಯಿಂದ ಅಂತಾರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣ ನಿರ್ಮಾಣ ಮಾಡುವ ಪ್ರಸ್ತಾವನೆ ಯಾವ ಹಂತದಲ್ಲಿ ಇದೆ? (ವಿವರ ನೀಡುವುದು)	ಅಧ್ಯಕ್ಷರು, ಕಲ್ಯಾಣ-ಕರ್ನಾಟಕ ಅಭಿವೃದ್ಧಿ ಮಂಡಳಿ ಇವರಿಂದ ಕಲಬುರಗಿಯಲ್ಲಿ ಅಂತಾರಾಷ್ಟ್ರೀಯ ಮಟ್ಟದ ಕ್ರಿಕೆಟ್ ಕ್ರೀಡಾಂಗಣವನ್ನು ನಿರ್ಮಿಸಲು 20 ಎಕರೆ ನಿವೇಶನವನ್ನು ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆಗೆ ಒದಗಿಸುವ ಕುರಿತು ಪ್ರಸ್ತಾವನೆ ಸ್ವೀಕರಿಸಲಾಗಿದೆ. ಜಿಲ್ಲಾಡಳಿತವು ಸೂಕ್ತ ನಿವೇಶನವನ್ನು ಗುರುತಿಸಿದ ನಂತರ ಮುಂದಿನ ಸೂಕ್ತ ಕ್ರಮ ಕೈಗೊಳ್ಳಲಾಗುವುದು.

ವೈಎಸ್‌ಡಿ/ಇಬಿಬಿ/167/2021

(ಡಾ. ನಾರಾಯಣಗೌಡ)
ರೇಷ್ಮೆ, ಯುವ ಸಬಲೀಕರಣ ಮತ್ತು
ಕ್ರೀಡಾ ಸಚಿವರು.